ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೧೭೭೬ (೨೧೪೭)

ಸದಸ್ಯರ ಹೆಸರು ಶ್ರೀ ಸಂಗಮೇಶ್ವರ ಬಿ ಕೆ

ಉತ್ತರಿಸುವ ಸಚಿವರು ಶ್ರೀ ಹೆಚ್ ಕೆ ಕುಮಾರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು)

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಅಂಗನವಾಡಿ ಕಾರ್ಯಕರ್ತೆಯರನ್ನು ಹಾಗೂ ಸಹಾಯಕರನ್ನು ನೇಮಕಾತಿ ಮಾಡಲಾಗುವುದೇ?	೨೦೦೫-೦೬ ಸಾಲಿನಲ್ಲಿ ರಾಜ್ಯ ಹೊಸದಾಗಿ ಮಂಜೂರಾದ ೧೧೩೧೩ ಅಂಗನವಾಡಿ ಕೇಂದ್ರಗಳಲ್ಲಿ ೫೪೬೨ ಅಂಗನವಾಡಿ ಕಾರ್ಯಕರ್ತೆಯರನ್ನು ಆಯ್ಕೆ ಮಾಡಲಾಗಿದ್ದು ಸದ್ಯ ಅಂಗನವಾಡಿ ಕಾರ್ಯಕರ್ತೆಯರ ಆಯ್ಕೆ ಪ್ರಕ್ರಿಯೆ ಉಚ್ಚ ನ್ಯಾಯಾಲಯದ ತಡೆಯಾಜ್ಞೆಯಿರುವುದರಿಂದ ಸ್ಥಗಿತಗೊಂಡಿರುತ್ತದೆ ಹಾಗೂ ತಡೆಯಾಜ್ಞೆಯ ಮುನ್ನ ೯೫೪೮ ಅಂಗನವಾಡಿ ಸಹಾಯಕಿಯರನ್ನು ಆಯ್ಕೆ ಮಾಡಿದ್ದು ಆಯ್ಕೆ ಪ್ರಕ್ರಿಯೆ ಜಾರಿಯಲ್ಲಿರುತ್ತದೆ
ಆ)	ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕರ ಹುದ್ದೆ ಹೆಚ್ಚಿಸುವ ಪ್ರಸ್ತಾವನೆಯಿದ್ದರೂ	೨೦೦೬-೦೭ನೇ ಸಾಲಿನಲ್ಲಿ ೨೬೪೬ ಹೊಸ ಅಂಗನವಾಡಿ ಕೇಂದ್ರಗಳು ಹಾಗೂ ೪೦೫ ಮಿನಿ ಅಂಗನವಾಡಿ ಕೇಂದ್ರಗಳು ರಾಜ್ಯಕ್ಕೆ ಮಂಜೂರಾಗಿದ್ದು ಕೇಂದ್ರಗಳನ್ನು

	ಈವರೆಗೂ ಕ್ರಮಕೈಗೊಳ್ಳದಿರಲು ಕಾರಣವೇನು?	ಪ್ರಾರಂಭಿಸಲು ಹಾಗೂ ಹುದ್ದೆಗಳನ್ನು ಭರ್ತಿಮಾಡಲು ಕ್ರಮ ವಹಿಸಲಾಗುತ್ತಿದೆ ಸುಪ್ರೀಂಕೋರ್ಟಿನ ಆದೇಶದಂತೆ ಕನಿಷ್ಟ ೩೦೦ರಿಂದ ೧೦೦೦ ಜನವಸತಿಯಿರುವ ಎಲ್ಲಾ ಪ್ರದೇಶಗಳಲ್ಲಿ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸುವ ಬಗ್ಗೆ ಕ್ರಮವಹಿಸಲಾಗುತ್ತಿದೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೧೭೭೭ (೨೧೪೮)

ಸದಸ್ಯರ ಹೆಸರು ಶ್ರೀ ಸಂಗಮೇಶ್ವರ ಬಿ ಕೆ

ಉತ್ತರಿಸುವ ಸಚಿವರು ಶ್ರೀ ಬಿ ನಾಗರಾಜ ಶೆಟ್ಟಿ (ಮೀನುಗಾರಿಕೆ ಹಾಗೂ ಮುಜರಾಯಿ ಸಚಿವರು)

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಭದ್ರಾವತಿ ತಾಲ್ಲೂಕಿನ ಗ್ರಾಮಾಂತರ ಪ್ರದೇಶದ ಹೊನ್ನೆಗುಡ್ಡದ ಶ್ರೀರಂಗನಾಥ ಸ್ವಾಮಿ ದೇವಸ್ಥಾನ ಹಾಗೂ ಲಕ್ಷ್ಮೀ ನರಸಿಂಗ ದೇವಸ್ಥಾನದ ಜೋಣೋರ್ದ್ಧಾರಕ್ಕಾಗಿ ಹಣ ಮಂಜೂರಾತಿ ಬಗ್ಗೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರಕ್ಕೆ ತಿಳಿದಿದೆಯೇ?	ಭದ್ರಾವತಿ ನಗರದ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ದೇವಾಲಯ (ಪ್ರಾಚ್ಯವಸ್ತು ಇಲಾಖೆಗೆ ಸೇರಿದ್ದು) ಮತ್ತು ಹೊನ್ನೆಗುಡ್ಡದ ಶ್ರೀ ರಂಗನಾಥ ಸ್ವಾಮಿ ದೇವಾಲಯಗಳ ಜೀಣೋರ್ದ್ಧಾರಕ್ಕೆ ಹಣ ಮಂಜೂರಾತಿ ಕೋರಿ ಯಾವುದೇ ಪ್ರಸ್ತಾವನೆಗಳು ಬಂದಿರುವುದಿಲ್ಲ